## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 186 (127) |
| ಸದಸ್ಯರ ಹೆಸರು | : | ಡಾ.ತಳವಾರ ಸಾಬಣ್ಣ (ಶಿಕ್ಷಕರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 14.02.2024 |
| ಉತ್ತರಿಸುವ ಸಚಿವರು | : | ಮಾನ್ಯ ಕಂದಾಯ ಸಚಿವರು |

| ಪ್ರಶ್ನೆ | ಉತ್ತರ |
|---|---|
| (ಅ) ರಾಜ್ಯ ಸರ್ಕಾರ ಪ್ರಸಕ್ತ ಸಾಲಿನಲ್ಲಿ ಘೋಷಿಸಿರುವ ಬರಪೀಡಿತ ತಾಲ್ಲೂಕುಗಳ ಸಂಖ್ಯೆ ಎಷ್ಟು? | ಕೇಂದ್ರ ಸರ್ಕಾರದ ಕೃಷಿ ಮಂತ್ರಾಲಯದ ಬರ ನಿರ್ವಹಣೆ ಕೈಪಿಡಿ-2020ರನ್ವಯ 2023ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ 223 ತಾಲ್ಲೂಕುಗಳನ್ನು (196 ತೀವ್ರ ಬರ & 27 ಸಾಧರಣ ಬರ) ಬರ ಪೀಡಿತ ತಾಲ್ಲೂಕುಗಳೆಂದು ಘೋಷಿಸಲಾಗಿದೆ. |
| (ಆ) ಸದರಿ ಬರಪೀಡಿತ ತಾಲ್ಲೂಕುಗಳ ರೈತರಿಗೆ ರಾಜ್ಯ ಸರ್ಕಾರ ಬಿಡುಗಡೆ ಮಾಡಿರುವ ಬೆಳೆ ಪರಿಹಾರದ ಮೊತ್ತವೆಷ್ಟು; | ಕೇಂದ್ರ ಸರ್ಕಾರದಿಂದ NDRF ಅನುದಾನವನ್ನು ನಿರೀಕ್ಷಿಸಿ ರಾಜ್ಯ ವಿಪತ್ತು ಪರಿಹಾರ ನಿಧಿ (SDRF) ಮಾರ್ಗಸೂಚಿಗಳ ಪ್ರಕಾರ ಬೆಳೆ ಹಾನಿ ಪರಿಹಾರದ ಮೊದಲನೇ ಕಂತಾಗಿ / ಬೆಳೆ ಹಾನಿ ಪರಿಹಾರವಾಗಿ ಅರ್ಹತೆಯ ಅನುಗುಣವಾಗಿ ಗರಿಷ್ಟ ರೂ.2,000/- ರವರೆಗೆ ಪ್ರತಿ ರೈತರಿಗೆ ಪಾವತಿಸಲು ಕರ್ನಾಟಕ ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರದ ಆಯುಕ್ತರಿಗೆ ರೂ.685 ಕೋಟಿ ಬಿಡುಗಡೆಗೊಳಿಸಿದ್ದು, ಈ ಪೈಕಿ ದಿನಾಂಕ:09-02-2024ರವರೆಗೆ 32.34 ಲಕ್ಷ ಅರ್ಹ ರೈತರ ಬ್ಯಾಂಕ್ ಖಾತೆಗೆ ರೂ.613.16 ಕೋಟಿಗಳನ್ನು ನೇರವಾಗಿ ಡಿಬಿಟಿ ಮೂಲಕ ಜಮೆ ಮಾಡಲಾಗಿದೆ. |
| (ಇ) ಬರಪರಿಹಾರ ಸಲುವಾಗಿ ಕೇಂದ್ರ ಸರ್ಕಾರಕ್ಕೆ ಪ್ರಸ್ತುತ ಸಲ್ಲಿಸಲಾಗಿದೆಯೇ; ಕೇಂದ್ರ ಸರ್ಕಾರ ಈವರೆಗೆ ಪರಿಹಾರ ಬಿಡುಗಡೆಗೊಳಿಸಿದೆಯೇ; | ಬರ ನಿರ್ವಹಣ ಕ್ರಮಗಳಿಗೆ ಕೇಂದ್ರ ಸರ್ಕಾರದ SDRF ಮಾರ್ಗಸೂಚಿಯನುಸಾರ ರೂ.18171.44 ಕೋಟಿಗಳ ಆರ್ಥಿಕ ನೆರವನ್ನು ರಾಷ್ಟ್ರೀಯ ವಿಪತ್ತು ಪರಿಹಾರ ನಿಧಿ (NDRF) ರಡಿ ಕೋರಿ ಮೆಮೋರಾಂಡಂ ಸಲ್ಲಿಸಲಾಗಿದ್ದು, ಅನುದಾನವನ್ನು ನಿರೀಕ್ಷಿಸಲಾಗಿದೆ. |
| (ಈ) ಬರ ಪರಿಹಾರ ನೆರವು ಸಲುವಾಗಿ ರಾಜ್ಯ ಮತ್ತು ಕೇಂದ್ರ ಸರ್ಕಾರದ ಹೆಸರಿನಲ್ಲಿ ಜಂಟಿ ಖಾತೆ ತೆರೆಯುವ ಬಗ್ಗೆ ಕೇಂದ್ರದ ಒತ್ತಾಯವಿದೆಯೇ ಹಾಗಿದ್ದಲ್ಲಿ ಈ ಸಂಬಂಧ ರಾಜ್ಯ ಸರ್ಕಾರದ ನಿಲುವೇನು? | ಬರ ಪರಿಹಾರ ಮೊತ್ತವನ್ನು ಸ್ವೀಕರಿಸಲು ಕೇಂದ್ರ ಮತ್ತು ರಾಜ್ಯ ಸರ್ಕಾರದ ಹೆಸರಿನಲ್ಲಿ ಜಂಟಿ ಖಾತೆ ತೆರೆಯಲು ಕೇಂದ್ರ ಸರ್ಕಾರದಿಂದ ಯಾವುದೇ ನಿರ್ದೇಶನ ರಾಜ್ಯ ಸರ್ಕಾರಕ್ಕೆ ಬಂದಿರುವುದಿಲ್ಲ. |

**ಕಡತ ಸಂಖ್ಯೆ: ಕಂಇ 58 ಟಿಎನ್ಆರ್ 2024**

(ಕೃಷ್ಣ ಬೈರೇಗೌಡ)
ಕಂದಾಯ ಸಚಿವರು